೧೧

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 435 (598) |
| ಸದಸ್ಯರ ಹೆಸರು | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 11.12.2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪ್ರಸ್ತುತ ಚಾಲ್ತಿಯಲ್ಲಿರುವ 384 ಕೆ.ಎ.ಎಸ್. ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿ ಒಟ್ಟು ಎಷ್ಟು ಅಭ್ಯರ್ಥಿಗಳು ಕನ್ನಡ ಮಾಧ್ಯಮದಲ್ಲಿ ಹಾಗೂ ಆಂಗ್ಲ ಮಾಧ್ಯಮದಲ್ಲಿ ಮುಖ್ಯ ಪರೀಕ್ಷೆಯನ್ನು ಬರೆದಿದ್ದಾರೆ; | ಪ್ರಸ್ತುತ ಕರ್ನಾಟಕ ಲೋಕಸೇವಾ ಆಯೋಗದಲ್ಲಿ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗಾಗಿ ನಡೆಸಿರುವ ಮುಖ್ಯ ಪರೀಕ್ಷೆಯ ಪರೀಕ್ಷೋತ್ತರ ಕಾರ್ಯವು ಪ್ರಗತಿಯಲ್ಲಿರುತ್ತದೆ. ಈ ಹಿನ್ನಲೆಯಲ್ಲಿ ಪ್ರಕ್ರಿಯೆಗೆ ಸಂಬಂಧಿಸಿದ ಯಾವುದೇ ಮಾಹಿತಿಯನ್ನು ಬಹಿರಂಗಗೊಳಿಸಲು ಈ ಹಂತದಲ್ಲಿ ಅವಕಾಶವಿರುವುದಿಲ್ಲ. |
| ಆ | ಪೂರ್ವಭಾವಿ ಪರೀಕ್ಷೆಯಿಂದ ಅರ್ಹತೆ ಪಡೆದು ಹಾಗೂ ಪೂರ್ವಭಾವಿ ಪರೀಕ್ಷೆಯಲ್ಲಿ ಅರ್ಹತೆ ಪಡೆಯದೆ ನ್ಯಾಯಾಲಯದ ಮೂಲಕ ಮಧ್ಯಂತರ ಆದೇಶ ಪಡೆದು ಕನ್ನಡ ಹಾಗೂ ಆಂಗ್ಲ ಮಾಧ್ಯಮದಲ್ಲಿ ಮುಖ್ಯ ಪರೀಕ್ಷೆ ಬರೆದ ಅಭ್ಯರ್ಥಿಗಳ ಸಂಖ್ಯೆ ಎಷ್ಟು: (ಮಾಧ್ಯಮವಾರು ವಿವರ ನೀಡುವುದು) | |
| ಇ | ಪೂರ್ವಭಾವಿ ಪರೀಕ್ಷೆಯಿಂದ ಮುಖ್ಯ ಪರೀಕ್ಷೆಗೆ ಅರ್ಹತೆ ಪಡೆಯಲು ಪ್ರವರ್ಗವಾರು ನಿಗದಿಪಡಿಸಿದ್ದ ಕಟ್ ಆಫ್ ಅಂಕಗಳು ಎಷ್ಟು; ಹಾಗೂ ಯಾವ ಮಾನದಂಡದಡಿಯಲ್ಲಿ ಅಭ್ಯರ್ಥಿಗಳನ್ನು ಮುಖ್ಯ ಪರೀಕ್ಷೆಗೆ ಆಯ್ಕೆ ಮಾಡಲಾಗಿತ್ತು? (ವಿವರ ನೀಡುವುದು) | ಪೂರ್ವಭಾವಿ ಪರೀಕ್ಷೆಯಿಂದ ಮುಖ್ಯ ಪರೀಕ್ಷೆಗೆ ಅರ್ಹತೆ ಪಡೆಯಲು ಪ್ರವರ್ಗವಾರು ಕಟ್ ಆಫ್ ಅಂಕಗಳನ್ನು ನಿಗದಿಪಡಿಸಿರುವುದಿಲ್ಲ.<br>ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಗಳು 1997 ಹಾಗೂ ದಿನಾಂಕ: 17.4.2021ರ ಅಧಿಸೂಚನೆ ಸಂಖ್ಯೆ: ಸಿಆಸುಇ 48 ಸೇಲೋಆ 2019ರಲ್ಲಿ ನಿರ್ದಿಷ್ಟಪಡಿಸಿರುವಂತೆ ಅನುಸೂಚಿತ ಜಾತಿ, ಅನುಸೂಚಿತ ಪಂಗಡ, ಇತರೆ ಹಿಂದುಳಿದ ವರ್ಗಗಳು ಹಾಗೂ ಸಾಮಾನ್ಯ ವರ್ಗಕ್ಕೆ ಮೀಸಲಿರಿಸಿರುವ ರಿಕ್ತ ಸ್ಥಾನಗಳ 1:15 ಅನುಪಾತದಲ್ಲಿ ಪೂರ್ವಭಾವಿ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಮುಖ್ಯ ಪರೀಕ್ಷೆಗೆ ಆಯ್ಕೆ ಮಾಡಲಾಗಿರುತ್ತದೆ. |

**ಸಂಖ್ಯೆ:ಸಿಆಸುಇ 159 ಎಸ್‌ಎಸ್‌ಸಿ 2025**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ